**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 6 ಸೇನಿಸೇ 2018

ಕರ್ನಾಟಕ ಸರ್ಕಾರ ಸಚಿವಾಲಯ,
ಆರ್ಥಿಕ ಇಲಾಖೆ, ವಿಧಾನಸೌಧ,
ಬೆಂಗಳೂರು, ದಿನಾಂಕ: 17/09/2018

**ಸುತ್ತೋಲೆ**

ವಿಷಯ: 2018ರ ಪರಿಷ್ಕೃತ ವೇತನ ಶ್ರೇಣಿಯು ಜಾರಿಗೆ ಬಂದಿರುವ ಹಿನ್ನೆಲೆಯಲ್ಲಿ ಕುಟುಂಬ ಯೋಜನಾ ಕ್ರಮಗಳನ್ನು ಅನುಸರಿಸುವ ರಾಜ್ಯ ಸರ್ಕಾರಿ ನೌಕರರಿಗೆ ಉತ್ತೇಜನ ಕುರಿತು ಸ್ಪಷ್ಟೀಕರಣ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಎಫ್‌ಡಿ 11 ಎಸ್‌ಆರ್‌ಎಸ್ 99, ದಿನಾಂಕ:14.09.1999.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 4 ಸೇನಿಸೇ 2007, ದಿನಾಂಕ:20.09.2007.

*****

ಸಣ್ಣ ಕುಟುಂಬ ಸೂತ್ರವನ್ನು ಸರ್ಕಾರಿ ನೌಕರರಲ್ಲಿ ಉತ್ತೇಜಿಸುವ ಉದ್ದೇಶದಿಂದ, ಒಂದು ಅಥವಾ ಎರಡು ಜೀವಂತ ಮಕ್ಕಳನ್ನು ಹೊಂದಿದ ನಂತರ ಸರ್ಕಾರಿ ನೌಕರ ಅಥವಾ ಆತನ ಪತ್ನಿ ಸಂತಾನಹರಣ ಶಸ್ತ್ರ ಚಿಕಿತ್ಸೆಯನ್ನು ಮಾಡಿಸಿಕೊಂಡ ಪ್ರಕರಣಗಳಲ್ಲಿ ಸರ್ಕಾರಿ ನೌಕರನಿಗೆ ಒಂದು ವಿಶೇಷ ವೇತನ ಬಡ್ತಿಯನ್ನು ವೈಯಕ್ತಿಕ ವೇತನವಾಗಿ ನೀಡುವ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 27 ಎಸ್‌ಆರ್‌ಎಸ್ 85, ದಿನಾಂಕ:01.10.1985 ರಿಂದ ಜಾರಿಗೆ ತರಲಾಗಿದೆ. ಸದರಿ ಆದೇಶದ (v)ನೇ ಷರತ್ತಿನ ಪ್ರಕಾರ, ಈ ಯೋಜನೆಯ ಮೇರೆಗೆ ವೈಯಕ್ತಿಕ ವೇತನ ರೂಪದಲ್ಲಿ ಮಂಜೂರು ಮಾಡಲಾಗುವ ವಿಶೇಷ ವೇತನ ಬಡ್ತಿಯ ದರವು ಈ ಸೌಲಭ್ಯವನ್ನು ವಿಸ್ತರಿಸುವ ದಿನಾಂಕದಂದು ಸರ್ಕಾರಿ ನೌಕರನು ಪಡೆಯಲು ಅರ್ಹನಿರುವ ಮುಂದಿನ ವಾರ್ಷಿಕ ವೇತನಬಡ್ತಿ ದರಕ್ಕೆ ಸಮನಾಗಿರತಕ್ಕದಾಗಿದ್ದು, ನೌಕರನ ಸಂಪೂರ್ಣ ಸೇವಾವಧಿಯಲ್ಲಿ ಈ ಬಡ್ತಿಯ ದರವು ಖಾಯಂ ಆಗಿ ನಿಗದಿಯಾಗತಕ್ಕದ್ದಾಗಿರುತ್ತದೆ. ಮತ್ತು ವೇತನದಲ್ಲಿನ ಯಾವುದೇ ಹೆಚ್ಚಳ ಅಥವಾ ಉನ್ನತ ಹುದ್ದೆಗೆ ಮುಂಬಡ್ತಿ ಇತ್ಯಾದಿ ಯಾವುದೇ ಕಾರಣದಿಂದಾಗಿ ಬದಲಾಗತಕ್ಕದ್ದಲ್ಲವೆಂದು ತಿಳಿಸಲಾಗಿದೆ.

ದಿನಾಂಕ:01.07.2017 ರಿಂದ ದಿನಾಂಕ:31.03.2018ರ ಅವಧಿಯಲ್ಲಿ ಮಿತ ಕುಟುಂಬ ಯೋಜನಾ ಕ್ರಮವನ್ನು ಅಳವಡಿಸಿಕೊಂಡ ಪ್ರಕರಣಗಳಲ್ಲಿ ಈ ಯೋಜನೆಯಡಿಯಲ್ಲಿ ವೈಯಕ್ತಿಕ ವೇತನ ರೂಪದಲ್ಲಿ ನೀಡಲಾಗುವ ವಿಶೇಷ ವೇತನ ಬಡ್ತಿಯನ್ನು 2012ರ ವೇತನ ಶ್ರೇಣಿಯ ದರದಲ್ಲಿ ಅಥವಾ 2018ರ ಪರಿಷ್ಕೃತ ವೇತನ ಶ್ರೇಣಿಯ ದರದಲ್ಲಿ ಮಂಜೂರು ಮಾಡಬೇಕೆ? ಎಂಬ ಬಗ್ಗೆ ಸ್ಪಷ್ಟೀಕರಣವನ್ನು ಕೋರಲಾಗುತ್ತಿದೆ.

6ನೇ ವೇತನ ಆಯೋಗದ ಶಿಫಾರಸ್ಸಿನಂತೆ ಜಾರಿಗೆ ಬಂದಿರುವ ವೇತನ ಶ್ರೇಣಿಗಳು 01.07.2017 ರಿಂದ ಕಾಲ್ಪನಿಕವಾಗಿ ಜಾರಿಗೆ ಬಂದಿದ್ದು, ವೇತನ ಶ್ರೇಣಿಗಳ ಪರಿಷ್ಕರಣೆಯ ಆರ್ಥಿಕ ಸೌಲಭ್ಯವು 1ನೇ ಏಪ್ರಿಲ್ 2018 ರಿಂದ ಲಭ್ಯವಾಗುತ್ತದೆ. ಅಲ್ಲದೆ, ದಿನಾಂಕ:01.07.2017 ರಿಂದ 31.03.2018 ರವರೆಗಿನ ಅವಧಿಗೆ ಪರಿಷ್ಕೃತ ಶ್ರೇಣಿಯಲ್ಲಿನ ವೇತನ ನಿಗಧಿಯಿಂದಾಗಿ ಅಥವಾ ಪುನರ್ ನಿಗಧಿಯಿಂದಾಗಿ ವೇತನ ಮತ್ತು ಭತ್ಯೆಗಳ ಮತ್ತು ನಿವೃತ್ತಿ ವೇತನದ ಆರ್ಥಿಕ ಬಾಕಿಗೆ ಯಾವುದೇ ಸರ್ಕಾರಿ ನೌಕರನು ಅರ್ಹನಾಗಿರುವುದಿಲ್ಲ.

ಈ ಹಿನ್ನೆಲೆಯಲ್ಲಿ, 01.07.2017 ರಿಂದ 31.03.2018 ರ ಅವಧಿಯಲ್ಲಿ ಮಿತ ಕುಟುಂಬ ಯೋಜನಾ ಕ್ರಮವನ್ನು ಅಳವಡಿಸಿಕೊಂಡ ಪ್ರಕರಣಗಳಲ್ಲಿ ಈ ಯೋಜನೆಯಡಿಯಲ್ಲಿ ವೈಯಕ್ತಿಕ ವೇತನ ರೂಪದಲ್ಲಿ ನೀಡಲಾಗುವ ವಿಶೇಷ ವೇತನ ಬಡ್ತಿಯನ್ನು 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಲಭ್ಯವಾಗುವ ವಾರ್ಷಿಕ ವೇತನ ಬಡ್ತಿಯ ದರದಲ್ಲಿ ಕಾಲ್ಪನಿಕವಾಗಿ ನಿಗದಿಪಡಿಸತಕ್ಕದು. ಆದರೆ ಈ ಯೋಜನೆಯಲ್ಲಿ ಮಂಜೂರು ಮಾಡುವ ವೈಯಕ್ತಿಕ ಬಡ್ತಿ ದರದ ಆರ್ಥಿಕ ಸೌಲಭ್ಯವು 1ನೇ ಏಪ್ರಿಲ್ 2018 ರಿಂದ ಲಭ್ಯವಾಗುತ್ತದೆ. ದಿ: 01/07/2017 ರಿಂದ ದಿ:31/03/2018 ರವರೆಗಿನ ಅವಧಿಯಲ್ಲಿ ಸಣ್ಣ ಕುಟುಂಬ ಯೋಜನಾ ಕ್ರಮಗಳನ್ನು ಅನುಸರಿಸುವ ನೌಕರರು ಪರಿಷ್ಕೃತ ವೇತನ ಶ್ರೇಣಿ 2018ರ ಸಂವಾದಿ ಕಾಲ್ಪನಿಕವಾಗಿ ಹೊಸವೇತನ ಶ್ರೇಣಿ ಸಂವಾದಿ ಸೌಲಭ್ಯದ ಪರಿಗಣನೆಗೆ ಅರ್ಹರಾದರೂ ಸಹ. ದಿ:01/07/2017ರಿಂದ ದಿ:31/03/2018 ರವರೆಗಿನ ಅವಧಿಗೆ ಸಂಬಂಧಿಸಿದ ಆರ್ಥಿಕ ಸೌಲಭ್ಯದ ಪಾವತಿ ಪರಿಗಣನೆಯನ್ನು ಪೂರ್ವ ಪರಿಷ್ಕೃತ ವೇತನ ಶ್ರೇಣಿ 2012 ಸಂವಾದಿ ಅಂದರೆ 2012ರ ಪರಿಷ್ಕೃತ ವೇತನ ಶ್ರೇಣಿಗನುಸಾರವಾಗಿ ಪಡೆಯಲು ಅರ್ಹರಾಗಿರುವುದಾಗಿದೆ. ಉಳಿದಂತೆ ಈ ಸೌಲಭ್ಯ ಪಡೆಯುವ ನೌಕರರು ದಿನಾಂಕ: 01.10.1985 ರ ಎಫ್‌ಡಿ 27 ಎಸ್‌ಆರ್‌ಎಸ್ 85ನೇ ಕ್ರಮಾಂಕದ ಆದೇಶದಲ್ಲಿ ನಿಗಧಿಪಡಿಸಿರುವ ಎಲ್ಲಾ ಷರತ್ತುಗಳನ್ನು ಪೂರೈಸಿರಬೇಕೆಂಬುದನ್ನು ಈ ಮೂಲಕ ಸ್ಪಷ್ಟಪಡಿಸಿದೆ.

Suvarna B.S.
(ಬಿ.ಎಸ್. ಸುವರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

**ಪ್ರತಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.

6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
8. ಮಹಾಲೇಖಪಾಲರು(ಕಂದಾಯ, ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ). ಬೆಂಗಳೂರು
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
18. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145–ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ:6 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ WWW.finance.kar.nic.in ವೀಕ್ಷಿಸಿ.